<u>ಅಸಲು ದಾವಾ ಸಂಖ್ಯೆ:-**47/2022**</u> ಪಿ.ಡಬ್ಲ್ಯೂ:- **2**

ದಿನಾಂಕಃ **11-09-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಂದುವರೆದ ಪಾಟೀ ಸವಾಲು:- ಪ್ರತಿವಾದಿ ಪರ ವಕೀಲರಿಂದ:-</u>

ವಾದಿ ಮತ್ತು ಪ್ರತಿವಾದಿಗಳು ಬೇರೆ ಬೇರೆ ಜನಾಂಗದವರು ಎಂದರೆ ಸರಿ. ವಾದಿಯು ದಾವಾ ಆಸ್ತಿಯನ್ನು ಮರುಮಂಜೂರಾತಿ ಮಾಡುವಂತೆ ತಹಶೀಲ್ದಾರ್ ರವರಿಗೆ ಅರ್ಜಿಯನ್ನು ಸಲ್ಲಿಸಿದ್ದರು ಎಂದರೆ ನನಗೆ ಗೊತ್ತಿಲ್ಲ. ತಹಶೀಲ್ದಾರ್ ರವರು ವಾದಿ ಸಲ್ಲಿಸಿದ ಅರ್ಜಿಯನ್ನು ದಾವಾ ಆಸ್ತಿಯು ತಳವಾರ್ ಉಂಬಳಿ ಜಮೀನು ಆಗಿದ್ದು ವಾದಿಗೆ ಯಾವುದೇ ಹಕ್ಕು ಮತ್ತು ಹಿತಾಸಕ್ತಿ ಇಲ್ಲ ಎಂದು ವಜಾ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಆದೇಶವನ್ನು ಪ್ರಶ್ನಿಸಿ ವಾದಿಯವರು ಉಪವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಅರ್ಜಿಯನ್ನು ಸಲ್ಲಿಸಿದ್ದರು ಎಂದರೆ ಸರಿಯಲ್ಲ. ಸದರಿ ಅರ್ಜಿಯನ್ನು ಸಹ ಉಪವಿಭಾಗಾಧಿಕಾರಿಗಳು ವಾದಿಯ ಅಜ್ಜಿ ಪ್ರತಿವಾದಿಯ ಅಜ್ಜನ ಹತ್ತಿರ 27 ಗುಂಟೆ ಜಮೀನಿಗೆ ಒಪ್ಪಂದ ಮಾಡಿಕೊಂಡಿದ್ದು ಅದರಲ್ಲಿ ಕೇವಲ 19 ಗುಂಟೆ ಜಮೀನು ಇರುತ್ತದೆ ಎಂದು ಮತ್ತು ವಾದಿಯವರು ತಳವಾರ್ ವಂಶಸ್ಥರು ಅಲ್ಲ ಎಂದು ಅರ್ಜಿಯನ್ನು ವಜಾ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸರ್ವೇ ನಂ.55 ರಲ್ಲಿ ಒಟ್ಟು ಎಷ್ಟು ಎಕರೆ ವಿಸ್ತೀರ್ಣ ಇದೆ ಎಂದು ನನಗೆ ಗೊತ್ತಿಲ್ಲ. ಪ್ರತಿವಾದಿಗಳ ಅಜ್ಜ ಕರಾರು ಪತ್ರವನ್ನು ಬರೆದುಕೊಟ್ಟಿದ್ದಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಕರಾರು ಪತ್ರದ ಆಧಾರದ ಮೇಲೆ ನಾನು ಸ್ವಾಧೀನಾನುಭವದಲ್ಲಿದ್ದೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಯ ಅಜ್ಜನಾಗಲೀ ಅವರ ವಾರಸುದಾರರಾಗಲೀ ಕರಾರು ಪತ್ರವನ್ನು ಬರೆದುಕೊಟ್ಟಿಲ್ಲ ನಾವೇ ಸೃಷ್ಟಿ ಮಾಡಿಕೊಂಡಂತಹ ಸುಳ್ಳು ಕರಾರು ಪತ್ರ ಎಂದರೆ ಸರಿಯಲ್ಲ. ನನಗೂ ಮತ್ತು ವಾದಿಯ ಕುಟುಂಬಕ್ಕೂ ಯಾವುದೇ ಸಂಬಂಧ ಇರುವುದಿಲ್ಲ

ಮತ್ತು ಒಂದು ವೇಳೆ ವಾದಿ ನ್ಯಾಯಾಲಯಕ್ಕೆ ಬಂದರೆ ಸತ್ಯಾಂಶ ಹೊರಬರುತ್ತದೆ ಎಂಬ ಉದ್ದೇಶದಿಂದ ವಾದಿ ನ್ಯಾಯಾಲಯಕ್ಕೆ ಹಾಜರಾಗಿಲ್ಲ ಎಂದರೆ ಸರಿಯಲ್ಲ. ಕರಾರು ಪತ್ರವನ್ನು ಕಾಮವ್ವರವರ ಜೀವಿತಾವಧಿಯಲ್ಲಿ ಸೃಷ್ಟಿ ಮಾಡಿಕೊಂಡು ಅವರು ತೀರಿಕೊಂಡು 30-40 ವರ್ಷಗಳ ನಂತರ ಸಲ್ಲಿಸಿದ್ದಾರೆ ಎಂದರೆ ಸರಿಯಲ್ಲ. ನನಗೆ ಈ ದಾವೆಯ ಬಗ್ಗೆ ಯಾವುದೇ ವಿಚಾರ ಗೊತ್ತಿಲ್ಲದಿದ್ದರೂ ಸಹ ವಾದಿಯ ಮಾತುಕೇಳಿಕೊಂಡು ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.